ಶ್ರೀ ಎಂ. ರಾಜಶೇಖರ ಮೂರ್ತಿ.—ಮಾನ್ಯ ಅಧ್ಯಕ್ಷರೇ, ೧೯೯೦ ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಯಿತು. *

೧೯೯೦ ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎಂ. ರಾಜಶೇಖರ ಮೂರ್ತಿ.—(ಹಣಕಾಸು ಸಚಿವರು) ಮಾನ್ಯ ಅಧ್ಯಕ್ಷರೇ, ೧೯೯೦ ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೯೦ ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ. ರಾಜಶೇಖರ ಮೂರ್ತಿ.—ಮಾನ್ಯ ಅಧ್ಯಕ್ಷರೇ, ೧೯೯೦ ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಯಿತು. *

೧೯೯೦ ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎಂ. ರಾಜಶೇಖರ ಮೂರ್ತಿ.—(ಹಣಕಾಸು ಸಚಿವರು) ಮಾನ್ಯ ಅಧ್ಯಕ್ಷರೇ, ೧೯೯೦ ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ, ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೯೦ ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ, ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ರಾಜಶೇಖರ ಮೂರ್ತಿ.—ಮಾನ್ಯ ಅಧ್ಯಕ್ಷರೇ, ೧೯೯೦ ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ, ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಯಿತು. *

ಅಧ್ಯಕ್ಷರು.—ಈಗ ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣ ಪ್ರಸ್ತಾವ.

ರಾಜ್ಯಪಾಲರ ಭಾಷಣಕ್ಕೆ ಸಲ್ಲಿಸತಕ್ಕ ವಂದನಾರ್ಪಣಾ ನಿರ್ಣಯದ ಮೇಲಿನ ಚರ್ಚೆ

ಶ್ರೀ ಕಾಗೋಡು ತಿಮ್ಮಪ್ಪ.—ಮಾನ್ಯ ಅಧ್ಯಕ್ಷರೇ, ''ಮಾರ್ಚ್ ೧೫.೧೯೯೦ ರಂದು ವಿಧಾನ ಮಂಡಲದ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕೆ ಈ ಅಧಿವೇಶನದಲ್ಲಿ ಸೇರಿರುವ ವಿಧಾನ

---

* * Annexures